ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಉಡುಪಿ ಜಿಲ್ಲೆಯ ಲೋಕೋಪಯೋಗಿ ಇಲಾಖಾ ರಸ್ತೆಯ ಕುರಿತು

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) -

1021 (1219) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಉಡುಪಿ ಜಿಲ್ಲೆಯಲ್ಲಿರುವ ಲೋಕೋಪಯೋಗಿ ಇಲಾಖೆಯ ಅಧೀನದಲ್ಲಿರುವ ರಸ್ತೆಗಳು ಯಾವುವು; ಅವುಗಳ ಉದ್ದವೆಷ್ಟು; (ರಸ್ತೆ ಮತ್ತು ಕಿಲೋಮೀಟರ್‌ಗಳ ವಿವರ ನೀಡುವುದು)

(ಆ) ಈ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಯ ರಸ್ತೆಗಳೆಂದು ಯಾವಾಗ ಘೋಷಣೆ ಮಾಡಲಾಗಿರುತ್ತದೆ; ಘೋಷಣೆಯ ಪ್ರತಿಯನ್ನು ಒದಗಿಸುವುದು;

(ಇ) ಲೋಕೋಪಯೋಗಿ ರಸ್ತೆಗಳ ನಿಗದಿಪಡಿಸಲಾದ ಗಡಿ ರೇಖೆ, ಕಟ್ಟಡ ರೇಖೆ ಮತ್ತು ನಿಯಂತ್ರಣ ರೇಖೆಗಳು ಯಾವುವು; (ಆದೇಶದ ಪ್ರತಿ ಒದಗಿಸುವುದು)

(ಈ) ಈ ಕಟ್ಟಡ ರೇಖೆಗಳು ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಯತಿ, ಗ್ರಾಮ ಪಂಚಾಯತಿ ಪರಿಮಿತಿಯಲ್ಲಿ ಹಾಗೂ ಮಹಾನಗರ ಪಾಲಿಕೆಯಿಂದ 15 ಕಿ.ಮೀ. ಪರಿಮಿತಿಯಲ್ಲಿ ವ್ಯತ್ಯಾಸವಿರಲು ಕಾರಣವೇನು?